**ಕರ್ನಾಟಕ ಸರ್ಕಾರ**

ಸಂಖ್ಯೆ: ಆಇ 1 ಸೇನಿಸೇ 2024

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಡಾ. ಬಿ.ಆರ್. ಅಂಬೇಡ್ಕರ್ ವೀಧಿ
ಬೆಂಗಳೂರು, ದಿನಾಂಕ:13.05.2025.

**ಸುತ್ತೋಲೆ**

ವಿಷಯ:- ಕುಟುಂಬ ಯೋಜನಾ ಕ್ರಮಗಳನ್ನು ಅನುಸರಿಸುವ ರಾಜ್ಯ ಸರ್ಕಾರಿ ನೌಕರರಿಗೆ ಪರಿಷ್ಕೃತ ರಾಜ್ಯ ವೇತನ ಶ್ರೇಣಿಗಳನ್ವಯ ವಿಶೇಷ ವೇತನ ಬಡಿ ಮಂಜೂರಾತಿ ಕುರಿತು ಸ್ಪಷ್ಟೀಕರಣ.

********

7ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸಿನಂತೆ ಜಾರಿಗೆ ಬಂದಿರುವ ಪರಿಷ್ಕೃತ ರಾಜ್ಯ ವೇತನ ಶ್ರೇಣಿಗಳ ಆರ್ಥಿಕ ಸೌಲಭ್ಯವು ದಿನಾಂಕ:1.8.2024 ರಿಂದ ಲಭ್ಯವಾಗುತ್ತದೆ. ಈ ವೇತನ ಶ್ರೇಣಿಗಳಲ್ಲಿ ವೇತನ ನಿಗಧಿಕರಣವನ್ನು ದಿನಾಂಕ:1.7.2022 ರಿಂದ ಮಾಡಲು ಅವಕಾಶವಿರುವುದಾಗಿದೆ. ಅಲ್ಲದೇ ದಿನಾಂಕ:1.7.2022 ರಿಂದ 31.7.2024 ರವರೆಗಿನ ಅವಧಿಗೆ ಪರಿಷ್ಕೃತ ವೇತನ ಶ್ರೇಣಿಯಲ್ಲಿನ ವೇತನ ನಿಗಧಿಯಿಂದಾಗಿ ಅಥವಾ ಪುನರ್‌ನಿಗಧಿಯಿಂದಾಗಿ ವೇತನ ಮತ್ತು ಭತ್ಯೆಗಳನ್ನು ಮತ್ತು ನಿವೃತ್ತಿ ವೇತನದ ಹೆಚ್ಚಳಕ್ಕೆ ಯಾವುದೇ ಸರ್ಕಾರಿ ನೌಕರನು ಅರ್ಹನಾಗಿರುವುದಿಲ್ಲ.

ಈ ಹಿನ್ನೆಲೆಯಲ್ಲಿ ದಿನಾಂಕ:1.7.2022 ರಿಂದ 31.7.2024ರ ಅವಧಿಯಲ್ಲಿ ಮಿತ ಕುಟುಂಬ ಯೋಜನಾ ಕ್ರಮವನ್ನು ಅಳವಡಿಸಿಕೊಂಡ ಪ್ರಕರಣಗಳಲ್ಲಿ ವೈಯಕ್ತಿಕ ವೇತನ ರೂಪದಲ್ಲಿ ನೀಡಲಾಗುವ ವಿಶೇಷ ವೇತನ ಬಡ್ತಿಯನ್ನು 2024ರ ರಾಜ್ಯ ಪರಿಷ್ಕೃತ ವೇತನ ಶ್ರೇಣಿಯಲ್ಲಿ ಲಭ್ಯವಾಗುವ ವಾರ್ಷಿಕ ವೇತನದ ಬಡ್ತಿಯ ದರದಲ್ಲಿ ದಿನಾಂಕ:1.7.2022 ರಿಂದ ಜಾರಿಗೆ ಬರುವಂತೆ ಕಾಲ್ಪನಿಕವಾಗಿ ನೀಡತಕ್ಕದಾಗಿರುತ್ತದೆ. ದಿನಾಂಕ:1.7.2022 ರಿಂದ 31.7.2024 ರವರೆಗಿನ ಅವಧಿಗೆ ಪರಿಷ್ಕೃತ ಶ್ರೇಣಿಯಲ್ಲಿನ ವಿಶೇಷ ವೇತನ ಬಡ್ತಿ ಮಂಜೂರಾತಿಯಿಂದ ಉಂಟಾದ ಆರ್ಥಿಕ ಹೆಚ್ಚಳಕ್ಕೆ ಸರ್ಕಾರಿ ನೌಕರರು ಅರ್ಹರಾಗಿರುವುದಿಲ್ಲ. ಈ ಅವಧಿಯಲ್ಲಿ ಪರಿಷ್ಕರಣೆಯ ಪೂರ್ವದ ವೇತನ ಶ್ರೇಣಿಯಲ್ಲಿ ನಿಗದಿಪಡಿಸಿದ ವೇತನ ಬಡ್ತಿಯಂತೆ ಆರ್ಥಿಕ ಲಾಭವನ್ನು ಪಡೆಯಲು ಸರ್ಕಾರಿ ನೌಕರರು ಅರ್ಹರಿರುತ್ತಾರೆ. ಆದರೆ, ಈ ಯೋಜನೆಯಲ್ಲಿ ಮಂಜೂರು ಮಾಡುವ ವೈಯಕ್ತಿಕ ವೇತನ ಬಡ್ತಿ ದರದ ಆರ್ಥಿಕ ಸೌಲಭ್ಯವು ದಿನಾಂಕ:1.8.2024 ರಿಂದ ಲಭ್ಯವಾಗುತ್ತದೆ. ಉಳಿದಂತೆ ಈ ಸೌಲಭ್ಯ ಪಡೆಯುವ ನೌಕರರು ದಿನಾಂಕ:1.10.1985ರ ಸರ್ಕಾರಿ ಆದೇಶ ಸಂಖ್ಯೆ: ಆಇ 27 ಎಸ್‌ಆರ್‌ಎಸ್ 1985 ಹಾಗೂ ಈ ಸಂಬಂಧ ಕಾಲಕಾಲಕ್ಕೆ ಹೊರಡಿಸಿರುವ ಆದೇಶ/ಸುತ್ತೋಲೆ/ಸೇರ್ಪಡೆ ಆದೇಶ ಮುಂತಾದವುಗಳಲ್ಲಿ ನಿಗದಿಪಡಿಸಿರುವ ಎಲ್ಲಾ ಷರತ್ತು ಮಾರ್ಗಸೂಚಿಗಳನ್ನು ಪೂರೈಸಿರಬೇಕೆಂಬುದನ್ನು ಈ ಮೂಲಕ ಸ್ಪಷ್ಟಪಡಿಸಿದೆ.

(ಅಜಯ್ ಎಸ್. ಕೊರಡೆ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-1)

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಇವರಿಗೆ- ಮುಂದಿನ ಕರ್ನಾಟಕ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು.

**ಪ್ರತಿ ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ), ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್ ಬಾಕ್ಸ್ ಸಂಖ್ಯೆ:5398, ಬೆಂಗಳೂರು:560 001.

...ಪು.ತಿ.ನೋ...

2. ಮಹಾಲೇಖಪಾಲರು (ಇ&ಆರ್ಎಸ್ಎ), ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್ ಬಾಕ್ಸ್ ಸಂಖ್ಯೆ:5398, ಬೆಂಗಳೂರು: 560 001.
3. ಮಹಾಲೇಖಪಾಲರು (ಎ&ಇ), ಕರ್ನಾಟಕ ಪೋಸ್ಟ್ ಬಾಕ್ಸ್ ಸಂಖ್ಯೆ:5329/5369 ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
7. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.
8. ರೆಸಿಡೆಂಟ್ ಕಮಿಷನರ್, ಕರ್ನಾಟಕ ಭವನ, ನವದೆಹಲಿ.
9. ಎಲ್ಲಾ ಜಿಲ್ಲಾಧಿಕಾರಿಗಳು.
10. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗಾ.
11. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
12. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
13. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
14. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
15. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
16. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ / ವಿಧಾನ ಪರಿಷತ್ತು, ಬೆಂಗಳೂರು.
17. ಖಜಾನೆ ಅಧಿಕಾರಿ, ರಾಜ್ಯ ಹೂಜೂರು ಖಜಾನೆ / ಜಿಲ್ಲಾ ಖಜಾನೆಗಳು.
18. ಯೋಜನಾ ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
19. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145 "A" ಬಹುಮಹಡಿಗಳ ಕಟ್ಟಡ, ಬೆಂಗಳೂರು.
20. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನ ಸೌಧ, ಬೆಂಗಳೂರು.
21. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
22. ಕರ್ನಾಟಕ ಸರ್ಕಾರದ ಸಚಿವಾಲಯದ ಎಲ್ಲಾ ಶಾಖೆಗಳು.
23. ಕರ್ನಾಟಕ ಸರ್ಕಾರಿ ಸಚಿವಾಲಯದ ಗ್ರಂಥಾಲಯ / ವಿಧಾನ ಮಂಡಲದ ಗ್ರಂಥಾಲಯ.
24. ವಾರಪತ್ರ / ಶಾಖೆಯ ರಕ್ಷಾ ಕಡತ. Web portal.

(ಕ್ರಮ ಸಂಖ್ಯೆ: 1 ರಿಂದ 8 ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಮುಖಪತ್ರದ ಮೂಲಕ) ಈ ಸುತ್ತೋಲೆಯನ್ನು ಅಧಿಕೃತ ಅಂತರ್ಜಾಲ ತಾಣ www.finance.karnataka.gov.in ವೀಕ್ಷಿಸಬಹುದಾಗಿದೆ.

***************